When it will be disposed of to the existing occupants as per Government order?

ಶ್ರೀ ಎಂ. ವೀರಪ್ಪಮೊಯಿಲಿ (ವಸತಿ ಮತ್ತು ನಗರಾಭಿವೃದ್ಧಿ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ, ಮಾನ್ಯ ಸದಸ್ಯರು ಪ್ರಸ್ತಾಪ ಮಾಡಿದ ವಿಚಾರವನ್ನು ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರ ಗಮನಕ್ಕೆ ತಂದು ಸೂಕ್ತ ಕ್ರಮವನ್ನು ಕೈಗೊಳ್ಳುವಂತೆ ತಿಳಿಸುತ್ತೇನೆ.

5) ಮೈಸೂರಿನಲ್ಲಿ ನಾಯಕ ಮತ್ತು ನಾಯ್ಕ ಜನಾಂಗದವರಿಗೆ ಪರಿಶಿಷ್ಟ ಜಾತಿಯ ಪ್ರಮಾಣ ಪತ್ರ.

ಶ್ರೀ ವಾಟಾಳ್ ನಾಗರಾಜ್ : ಅಧ್ಯಕ್ಷರೇ ನಾಯಕ, ನಾಯ್ಕ ಜನಾಂಗದವರನ್ನು ಪರಿಶಿಷ್ಟ ವರ್ಗದವರೆಂದು ಆದೇಶ ಹೊರಡಿಸಿದ್ದರೂ ಸಹ ಮೈಸೂರು ಜಿಲ್ಲೆಯಲ್ಲಿ ನಾಯಕ, ನಾಯ್ಕ ಮುಂತಾದ ಜನಾಂಗದವರಿಗೆ ಪರಿಶಿಷ್ಟ ವರ್ಗದವರೆಂದು ಜಾತಿ ಪ್ರಮಾಣ ಪತ್ರವನ್ನು ನೀಡದಿರುವುದರಿಂದ ಉಂಟಾಗಿರುವ ತೊಂದರೆಯನ್ನು ಸರಿಪಡಿಸಿ ನಾಯಕ ಮತ್ತು ನಾಯ್ಕ ಜನಾಂಗದವರಿಗೆ ಪರಿಶಿಷ್ಟ ವರ್ಗದ ಜಾತಿ ಪ್ರಮಾಣ ಪತ್ರವನ್ನು ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಆದೇಶ ನೀಡಬೇಕೆಂದು ಕೋರುತ್ತೇನೆ.

ಹಾಗೂ ಬೇಡ ಜನಾಂಗದ ಪರ್ಯಾಯ ಜಾತಿಯಾದ ಪರಿವಾರ ಜನಾಂಗದವರಿಗೆ ಪರಿಶಿಷ್ಟ ಪಂಡಗದ ಜಾತಿ ಪ್ರಮಾಣ ಪತ್ರವನ್ನು ನೀಡದೆ ಅನಾನುಕೂಲವಾಗಿರುತ್ತದೆ ಹಾಗೂ 1984ನೇ ನವೆಂಬರ್‌ನಲ್ಲಿ ಪರಿವಾರ ಮತ್ತು ತಳವಾರ ಜನಾಂಗದವರನ್ನು ಪರಿಶಿಷ್ಟ ವರ್ಗ ಜಾತಿಗೆ ಸೇರಿಸಬೇಕೆಂದು ಕೇಂದ್ರ ಸರ್ಕಾರದವರಿಗೆ ಶಿಫಾರಸ್ಸು ಮಾಡಿದ್ದು, ಸರ್ಕಾರದವರು ಆ ಬಗ್ಗೆ ಒತ್ತಾಯ ಮಾಡದಿರುವುದರಿಂದ ಉಂಟಾದ ವಿಳಂಬದಿಂದಾಗಿ ಪರಿವಾರ ಜನಾಂಗದವರಿಗೆ ಜಾತಿ ಪ್ರಮಾಣ ಪತ್ರ ನೀಡುವಲ್ಲಿ ಉಂಟಾಗಿರುವ ತೊಂದರೆಯ ವಿಚಾರವನ್ನು ಸರ್ಕಾರದವರು ಮನಗೊಂಡು ಕೇಂದ್ರ ಸರ್ಕಾರದ ಮೇಲೆ ಒತ್ತಾಯ ಮಾಡಿ ಪರಿವಾರ ಜಾತಿಯ ಜನಾಂಗದವರಿಗೆ ಉಂಟಾಗಿರುವ ತೊಂದರೆಯನ್ನು ನಿವಾರಿಸಬೇಕೆಂದು ಕೋರುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ (ಸಮಾಜ ಕಲ್ಯಾಣ ಸಚಿವರ ಪರವಾಗಿ) : ಅಧ್ಯಕ್ಷರೇ, ಕೇಂದ್ರ ಸರ್ಕಾರವು ದಿನಾಂಕ : 19-1-1991ರಲ್ಲಿ ಹೊರಡಿಸಿದ "The constitution (Sch. Tribes) orders (Amendment) ordinance, 1991".ರ ಪ್ರಕಾರ ನಾಯ್ಕ (Naik) ನಾಯಕ್ (Nayak) ಬೇಡ (Beda) ಬೇಡರ್ (Bedkar) ಮತ್ತು ವಾಲ್ಮೀಕಿ (Valmiki) ಜನಾಂಗಗಳನ್ನು ಪರಿಶಿಷ್ಟ ವರ್ಗದ ಪಟ್ಟಿಯಲ್ಲಿ ಸೇರಿಸಲಾಗಿದೆ. ಈ ವಿಶೇಷಾಜ್ಞೆಯನ್ನು ದಿನಾಂಕ : 9-5-91ರ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಇದಲ್ಲದೆ ಸರ್ಕಾರ ದಿನಾಂಕ : 28-6-91ರಂದು ಕ್ರಮ ಸಂಖ್ಯೆ: ಎಸ್‌ಡಬ್ಲ್ಯೂಎಲ್ 104 ಎಸ್‌ಎಡಿ 91ರಲ್ಲಿ ರಾಜ್ಯದ ಎಲ್ಲಾ ತಹಸೀಲ್ದಾರ್‌ರು, ಜಿಲ್ಲಾದಿಕಾರಿಗಳನ್ನೊಳಗೊಂಡಂತೆ ಎಲ್ಲಾ ಅಧಿಕಾರಿಗಳಿಗೆ ಒಂದು ಸುತ್ತೋಲೆ ಹೊರಡಿಸಿ ಈ ಮೇಲ್ಕಾಣಿಸಿದ ಜನಾಂಗಗಳಿಗೆ ಪರಿಶಿಷ್ಟ ಪಂಗಡದ ಪ್ರಮಾಣ ಪತ್ರ ನೀಡಬೇಕೆಂದು ಸೂಚನೆ ನೀಡಿದೆ.

ಪರಿವಾರ ಹಾಗೂ ತಳವಾದ ಜನಾಂಗಗಳನ್ನು ಕೇಂದ್ರ ಸರ್ಕಾರ ಇನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸದೇ ಇರುವುದರಿಂದ ಇವರಿಗೆ ಪರಿಶಿಷ್ಟ ಪಂಗಡ ಎಂದು ಪರಿಗಣಿಸಲು ಸಾಧ್ಯವಿರುವುದಿಲ್ಲ. ಪರಿವಾರ ಹಾಗೂ ತಳವಾರ

ಜನಾಂಗಗಳನ್ನು ಸಹ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸುವಂತೆ ಕೇಂದ್ರ ಸರ್ಕಾರಕ್ಕೆ ಹಿಂದೆಯೇ ಶಿಫಾರಸ್ಸು ಮಾಡಿದ್ದರೂ ಕೇಂದ್ರ ಸರ್ಕಾರವು ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿ ನಾಯ್ಕ, ನಾಯಕ, ಬೇಡಿ, ಬೇಡರ್ ಮತ್ತು ವಾಲ್ಮೀಕಿ ಜನಾಂಗಗಳನ್ನು ಮಾತ್ರ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಿರುತ್ತಾರೆ.

ಈಗಾಗಲೇ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿರುವ ಜನಾಂಗಗಳಿಗೆ ಯಾವ ತೊಂದರೆಯೂ ಆಗದಂತೆ ನಿಯಮಾನುಸಾರ ಜಾತಿ ಪ್ರಮಾಣ ಪತ್ರ ನೀಡಲು ಪುನಃ ಸೂಚನೆ ನೀಡಲಾಗುವುದು.

ಶಾಸನ ರಚನಾ ಕಾರ್ಯಕಲಾಪಗಳು

1) 1991ನೇ ಸಾಲಿನ ಕರ್ನಾಟಕ ಸಿವಿಲ್ ಸೇವಾ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತ ಕೋರಿಕೆ

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಮುಖ್ಯಮಂತ್ರಿಗಳ ಪರವಾಗಿ 1991ನೇ ಸಾಲಿನ ಕರ್ನಾಟಕ ಸಿವಿಲ್ ಸೇವಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷಣಿಯರು : ಪ್ರಸ್ತಾವ ಏನೆಂದರೆ "1991ನೇ ಸಾಲಿನ ಕರ್ನಾಟಕ ಸಿವಿಲ್ ಸೇವಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿಯನ್ನು ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿಯನ್ನು ನೀಡಲಾಯಿತು.

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವ ರು):ಮಾನ್ಯ ಉಪಾಧ್ಯಕ್ಷಿಣಿಯವರೆ, "1991ನೇ ಸಾಲಿನ ಕರ್ನಾಟಕ ಸಿವಿಲ್ ಸೇವಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಣಿಯರು : ವಿಧೇಯಕವನ್ನು ಮಂಡಿಸಲಾಯಿತು.

1991ನೇ ಸಾಲಿನ ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯೆ ವಿಧೇಯಕ (ಮಂಡನೆಗೆ ಅನುಮತಿ ಕೋರಿಕೆ)

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷಿಣಿಯರೇ ಮಾನ್ಯ ಮುಖ್ಯಮಂತ್ರಿಗಳ ಪರವಾಗಿ "1991ನೇ ಸಾಲಿನ ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯ ವಿಧೇಯಕವನ್ನು" ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಉಪಾಧ್ಯಕ್ಷಿಣಿಯರು : ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿಯನ್ನು ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷಣಿಯರೆ, "1991ನೇ ಸಾಲಿನ ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯ ವಿಧೇಯಕವನ್ನು" ಸಭೆಯ ಮುಂದೆ ಮಂಡಿಸುತ್ತೇನೆ.